ಕರ್ನಾಟಕ ಗೃಹ ಮಂಡಳಿ ವತಿಯಿಂದ ಭೂ ಸ್ವಾಧೀನ

1391(836); ಶ್ರೀ ಅರವಿಂದ ಲಿಂಬಾವಳಿ

ಅ) ಮಹದೇವಪುರ ವಿಧಾನ ಸಭಾ ಕ್ಷೇತ್ರ, ಚಿಕ್ಕಗುಬ್ಬಿ ಗ್ರಾಮದಲ್ಲಿ ಕರ್ನಾಟಕ ಗೃಹ ಮಂಡಳಿಯವರು ಭೂ–ಸ್ವಾಧೀನಪಡಿಸಿಕೊಳ್ಳಲು ಪ್ರಕಟಣೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಈ ಜಮೀನಿನಲ್ಲಿ ದುರ್ಬಲ ವರ್ಗದವರು ಸ್ವಯಂಸೇವಾ ಸಂಸ್ಥೆಗಳು ಹಾಗೂ ಶಿಕ್ಷಣ ಸಂಸ್ಥೆಗಳು ಸುಮಾರು ವರ್ಷದಿಂದ ಸಾರ್ವಜನಿಕರ ಸೇವೆಯಲ್ಲಿ ತೊಡಗಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದಲ್ಲಿ, ಈ ಜಮೀನನ್ನು ಭೂಸ್ವಾಧೀನ ಪ್ರಕ್ರಿಯೆಯಿಂದ ಕೈಬಿಡಲು ಸರ್ಕಾರ ಕ್ರಮಕೈಗೊಳ್ಳುವುದೇ?

ಶ್ರೀ ಡಾ॥ ಎಂ.ಹೆಚ್. ಅಂಬರೀಷ್ (ವಸತಿ ಸಚಿವರು)

ಅ) ಬಂದಿದೆ

ಆ) ಬಂದಿದೆ

ಇ) ಭೂ–ಸ್ವಾಧೀನ ಕಾಯ್ದೆ, 1894ರ ಕಲಂ 5(ಎ) ರನ್ವಯ ಕ್ರಮ ಕೈಗೊಳ್ಳಬೇಕಾಗುತ್ತದೆ.

ನೌಕರರ ಹಾಗೂ ಅಧಿಕಾರಿಗಳ ವಿವರ

1392(1061); ಶ್ರೀ ಅಶೋಕ್ ಖೇಣಿ (ಬೀದರ್ ದಕ್ಷಿಣ)

1) ಬೀದರ್ ದಕ್ಷಿಣ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅಡಿಯಲ್ಲಿ ವಿವಿಧ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ ನೌಕರರ ಸಂಖ್ಯೆ ಎಷ್ಟು; (ಹುದ್ದೆವಾರು ವಿವರ ನೀಡುವುದು)

2) ಸದರಿ ಇಲಾಖೆ ವ್ಯಾಪ್ತಿಯಲ್ಲಿ ಎಷ್ಟು ಹುದ್ದೆಗಳು ಖಾಲಿ ಇವೆ?

ಶ್ರೀ ಹೆಚ್.ಕೆ. ಪಾಟೀಲ್ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

1) ಬೀದರ್ ದಕ್ಷಿಣ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಡಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಈ ಕೆಳಕಂಡಂತೆ ವಿವಿಧ ಹುದ್ದೆಗಳಲ್ಲಿ ಅಧಿಕಾರಿ / ನೌಕರರು ಕಾರ್ಯನಿರ್ವಹಿಸುತ್ತಿದ್ದಾರೆ.

1.	ಸಹಾಯಕ ಇಂಜಿನಿಯರ್	02
2.	ಕಿರಿಯ ಇಂಜಿನಿಯರ್	06
3.	ಪಂಚಾಯತಿ ಅಭಿವೃದ್ಧಿ ಅಧಿಕಾರಿ	16
4.	ಗ್ರಾಮ ಪಂಚಾಯತ್ ಕಾರ್ಯದರ್ಶಿ	21
5.	ದ್ವಿತೀಯ ದರ್ಜೆ ಲೆಕ್ಕ ಸಹಾಯಕರು	05
	ಒಟ್ಟು	50

2) ಸದರಿ ಇಲಾಖೆ ವ್ಯಾಪ್ತಿಯಲ್ಲಿ ಈ ಕೆಳಕಂಡಂತೆ ವಿವಿಧ ಹುದ್ದೆಗಳು ಖಾಲಿ ಇರುತ್ತವೆ.

1.	ಪಂಚಾಯತಿ ಅಭಿವೃದ್ಧಿ ಅಧಿಕಾರಿ	15
2.	ಗ್ರಾಮ ಪಂಚಾಯತ್ ಕಾರ್ಯದರ್ಶಿ	10
3.	ದ್ವಿತೀಯ ದರ್ಜೆ ಲೆಕ್ಕ ಸಹಾಯಕ	09
	ಒಟ್ಟು	34